## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಜೈಕೃಷ್ಣ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಪಾವಗಡ ಇವರ ವಿರುದ್ಧ ಶಿಸ್ತು ಕ್ರಮ ಕುರಿತು ಅಂತಿಮ ಆದೇಶ.

**ಓದಲಾಗಿದೆ:** ಸರ್ಕಾರದ ನೋಟೀಸ್ ಸಂಖ್ಯೆ: ಗ್ರಾಅಪ 59 ವಿಸೇಬಿ 2011 ದಿನಾಂಕ: 22-10-2013

---

ಪ್ರಸ್ತಾವನೆ:

ಶ್ರೀ ಜೈ ಕೃಷ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಾವಗಡ ಆದ ನೀವು ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ 2005-06ನೇ ಸಾಲಿನ ಪಿ.ಎಂ.ಜಿ.ವೈ (ಜಿ.ಎ.ವೈ) ವಸತಿ ಯೋಜನೆಯಡಿಯಲ್ಲಿನ ಕಾಮಗಾರಿಗಳ ಅನುಷ್ಠಾನದಲ್ಲಿ ಪಿ.ಎಂ.ಜಿ.ವೈ ಯೋಜನೆಯ ನಿಯಮಗಳನ್ನು ಮಾರ್ಗಸೂಚಿಗಳನ್ನು ಹಾಗೂ ಸರ್ಕಾರದ ನಿರ್ದೇಶನಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿ ಅಸಮರ್ಪಕ ರೀತಿಯಲ್ಲಿ ಅನುಷ್ಠಾನಗೊಳಿಸಿರುತ್ತೀರಿ. ಹಾಗೂ ಸಂಬಂಧಿಸಿದ ದಾಖಲೆಗಳನ್ನು ಸಮರ್ಪಕ ರೀತಿಯಲ್ಲಿ ಕ್ರಮಬದ್ಧವಾಗಿ ನಿರ್ವಹಿಸಿರುವುದಿಲ್ಲ. ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 3 ರಲ್ಲಿನ ಲೆಕ್ಕ ಪತ್ರಗಳ ನಿರ್ವಹಣೆಯ ನಿರ್ದೇಶನಗಳನ್ನು ಮತ್ತು ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 14 ರ ವಿಧಿಗಳನ್ನು ಉಲ್ಲಂಘಿಸಿರುವುದು ಮತ್ತು 2005-06ನೇ ಸಾಲಿನ ಪಿ.ಎಂ.ಜಿ.ವೈ (ಜಿ.ಎ.ವೈ) ವಸತಿ ಯೋಜನೆಯ ಅನುಷ್ಠಾನಕ್ಕೆ ಬಿಡುಗಡೆ ಮಾಡಿದ್ದ ಹಣವನ್ನು ಅನುಷ್ಠಾನಾಧಿಕಾರಿಗಳ ಅನುಮತಿ ಪಡೆಯದೆ ಮಾರ್ಗಪಲ್ಲಟ ಮಾಡಿ ಬೇರೆ ಕಾಮಗಾರಿಗಳಿಗೆ ಉಪಯೋಗಿಸಿ ಮನಸ್ಸಿಗೆ ಬಂದಂತೆ ಸರ್ಕಾರಿ ಹಣವನ್ನು ಖರ್ಚು ಮಾಡಿ ಸರ್ಕಾರಿ ನಿಯಮ ಅದೇಶಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿ, ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 15 ರಲ್ಲಿನ ಲೆಕ್ಕ ಪತ್ರಗಳ ನಿರ್ವಹಣೆಯ ನಿರ್ದೇಶನಗಳನ್ನು ಉಲಂಘಿಸಿ, ಕರ್ತವ್ಯಲೋಪ ಎಸಗಿರುವ ಬಗ್ಗೆ ಮೇಲೆ ಓದಲಾದ ದಿನಾಂಕ: 22-10-2013 ರಂದು ಕರ್ನಾಟಕ ನಾಗರೀಕ ಸೇವಾ(ವನಿಮೇ) 1957ರ ನಿಯಮ 12ರ ಪ್ರಕಾರ ಕಾರಣ ಕೇಳುವ ನೋಟೀಸ್‌ನ್ನು ಜಾರಿ ಮಾಡಲಾಗಿತ್ತು. ಸದರಿ ನೋಟೀಸ್‌ಗೆ ಅಪಾದಿತ ಅಧಿಕಾರಿಯು ಲಿಖಿತ ಹೇಳಿಕೆಯನ್ನು ಸಲ್ಲಿಸದೆ ಇರುವುದರಿಂದ ಅವರ ಹೇಳಿಕೆ ಏನು ಇರುವುದಿಲ್ಲವೆಂದು ಪರಿಗಣಿಸಲಾಗಿದೆ.

ಶ್ರೀ ಜೈಕೃಷ್ಣ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ಪಾವಗಡ ಇವರು ಪಿ.ಎಂ.ಜಿ.ವೈ ವಸತಿ ಯೋಜನೆಯಡಿಯಲ್ಲಿನ ಕಾಮಗಾರಿಗಳ ಅನುಷ್ಠಾನದಲ್ಲಿ ಪಿ.ಎಂ.ಜಿ.ವೈ ಯೋಜನೆಯ ನಿಯಮಗಳನ್ನು, ಮಾರ್ಗಸೂಚಿಗಳನ್ನು ಹಾಗೂ ಸರ್ಕಾರದ ನಿರ್ದೇಶನಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿ ಅಸಮರ್ಪಕ ರೀತಿಯಲ್ಲಿ ಅನುಷ್ಠಾನಗೊಳಿಸಿ. ಹಾಗೂ ಸಂಬಂಧಿಸಿದ ದಾಖಲೆಗಳನ್ನು ಸಮರ್ಪಕ ರೀತಿಯಲ್ಲಿ ಕ್ರಮಬದ್ಧವಾಗಿ ನಿರ್ವಹಿಸದೆ, ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 3 ರಲ್ಲಿನ ಲೆಕ್ಕ ಪತ್ರಗಳ ನಿರ್ವಹಣೆಯ ನಿರ್ದೇಶನಗಳನ್ನು ಮತ್ತು ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 14 ರ ವಿಧಿಗಳನ್ನು ಉಲ್ಲಂಘಿಸಿ ಕರ್ತವಲೋಪವೆಸಗಿರುವುದು ಕಂಡುಬರುತ್ತದೆ. ಆದ್ದರಿಂದ ಸದರಿಯವರ ಕರ್ತವ್ಯಲೋಪಕ್ಕೆ ಸಂವಾದಿಯಾಗಿ ವಾಗ್ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 59 ವಿಸೇಬಿ 2011 ಬೆಂಗಳೂರು ದಿನಾಂಕ:04-01-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಜೈಕೃಷ್ಣ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಪಾವಗಡ ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಟಿ.ನರಸೀಪುರ ಇವರಿಗೆ ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಾವಳಿಗಳು 1957ರ ನಿಯಮ 8(ii)ರ ಅನ್ವಯ "ವಾಗ್ದಂಡನೆ" ವಿಧಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು,
4. ಶ್ರೀ ಜೈಕೃಷ್ಣ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಟಿ.ನರಸೀಪುರ, ಮೈಸೂರು ಜಿಲ್ಲೆ.
5. ಸರ್ಕಾರದ ಅಧೀನ ಕಾರ್ಯದರ್ಶಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.